ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ತಿನ ಸಭಾಪತಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ ದಿನಾಂಕ : DATE : 11/2/21

# ಬಿಎಸ್‌ವೈ, ಎಚ್‌ಡಿಕೆಗೆ ಹೊರಟ್ಟಿ ಕೃತಜ್ಞತೆ



ಸಿಎಂ ಯಡಿಯೂರಪ್ಪ ಅವರನ್ನು ಭೇಟಿಯಾದ ಬಸವರಾಜ ಹೊರಟ್ಟಿ.



ಬಸವರಾಜ ಹೊರಟ್ಟಿ ಅವರು ಮಾಜಿ ಸಿಎಂ ಎಚ್.ಡಿ. ಕುಮಾರಸ್ವಾಮಿ ಅವರನ್ನು ಭೇಟಿ ಮಾಡಿ ಕೃತಜ್ಞತೆ ಸಲ್ಲಿಸಿದರು.

**ಬೆಂಗಳೂರು:** ವಿಧಾನಪರಿಷತ್‌ನ ನೂತನ ಸಭಾಪತಿಯಾಗಿ ಅಧಿಕಾರ ಸ್ವೀಕರಿಸಿದ ಹಿನ್ನೆಲೆ ಬಸವರಾಜ ಹೊರಟ್ಟಿ ಅವರು ಬುಧವಾರ ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಅವರನ್ನು ಭೇಟಿ ಮಾಡಿ ಕೃತಜ್ಞತೆ ಸಲ್ಲಿಸಿದರು.

ಜೆಪಿ ನಗರದಲ್ಲಿರುವ ಎಚ್.ಡಿ.ಕುಮಾರಸ್ವಾಮಿ ನಿವಾಸಕ್ಕೆ ಭೇಟಿ ನೀಡಿದ ಬಸವರಾಜ ಹೊರಟ್ಟಿ ಅವರು, ಹೂಗುಚ್ಛ ನೀಡಿ ಸಭಾಪತಿಯಾಗಲು ಬೆಂಬಲಿಸಿದ್ದಕ್ಕೆ ಕೃತಜ್ಞತೆ ಸಲ್ಲಿಸಿದರು. ಬಸವರಾಜ ಹೊರಟ್ಟಿ ಅವರನ್ನು ಮಂಗಳವಾರ ರಾತ್ರಿ ಊಟಕ್ಕೆ ಆಹ್ವಾನಿಸಿದ ಸಿಎಂ ಯಡಿಯೂರಪ್ಪನವರು, ತಮ್ಮ ನಿವಾಸದಲ್ಲಿ ಶುಭಾಶಯ ತಿಳಿಸಿದರು. ಅದೇ ರೀತಿ ಹೊರಟ್ಟಿ ಅವರು ಸಹ ತಮಗೆ ಬೆಂಬಲ ನೀಡಿದ್ದಕ್ಕೆ ಮುಖ್ಯಮಂತ್ರಿಗೆ ಕೃತಜ್ಞತೆ ಸಲ್ಲಿಸಿದರು.